**All India Radio: Bangalore**
**National Bulletin In Kannada**
**09.10.2026  07.35 a.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**09.10.2026  07.35 a.m.**

---

ಮುಖ್ಯಾಂಶಗಳು

೧.	ತೆರಿಗೆ ವಂಚನೆ ಪ್ರಕರಣದಲ್ಲಿ ಶಿಕ್ಷೆಯ ನಿರ್ಧಾರ ನ್ಯಾಯಾಂಗದ ವಿವೇಚನೆಗೆ - ಜಿಎಸ್‌ಟಿ ಮಂಡಳಿ ನಿರ್ಧಾರ

೨.	ನವದೆಹಲಿಯಲ್ಲಿಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕುರಿತ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೩.	ತಾಂತ್ರಿಕ ಕ್ಷೇತ್ರದ ಸಾಧನೆಗಾಗಿ ಭಾರತೀಯ ಮೂಲದ ಸತ್ಯ ನಾಡೆಲ್ಲಾ ಅವರಿಗೆ ಅಮೆರಿಕದ ಅತ್ಯುನ್ನತ ಪ್ರಶಸ್ತಿ

೪.	ಆರ್ಕ್ಟಿಕ್ ಓಪನ್ ಬ್ಯಾಡ್ಮಿಂಟನ್: ಮಹಿಳೆಯರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ಗೆ ಪಿ.ವಿ.ಸಿಂಧು ಲಗ್ಗೆ

---

ಜಿಎಸ್‌ಟಿ ಮಂಡಳಿಯು ತೆರಿಗೆ ಅಧಿಕಾರಿಗಳ ಬಂಧನದ ಅಧಿಕಾರವನ್ನು ರದ್ದುಗೊಳಿಸಿದೆ ಮತ್ತು ಕಾನೂನು ಕ್ರಮ ಜರುಗಿಸಲು ಇರುವ ಆರ್ಥಿಕ ಮಿತಿಯನ್ನು ಒಂದು ಕೋಟಿ ರೂಪಾಯಿಗಳಿಂದ ೫ ಕೋಟಿ ರೂಪಾಯಿಗಳಿಗೆ ಹೆಚ್ಚಿಸಿದೆ.

ದಂಡ, ಜೈಲು ಶಿಕ್ಷೆ ಅಥವಾ ಇವೆರಡನ್ನೂ ಒಳಗೊಂಡಿರುವ ಶಿಕ್ಷೆಯ ನಿರ್ಧಾರವನ್ನು ಪ್ರತಿ ಪ್ರಕರಣದಲ್ಲೂ ನ್ಯಾಯಾಂಗದ ವಿವೇಚನೆಗೆ ಬಿಡಲಾಗಿದೆ. ತಡವಾಗಿ ರಿಟರ್ನ್ಸ್ ಸಲ್ಲಿಸುವ, ತಪ್ಪು ಮಾಡುವ ಅಥವಾ ಪಾವತಿಯಲ್ಲಿ ವಿಳಂಬ ಮಾಡುವ ತೆರಿಗೆದಾರರು ಬಾಕಿ ವಸೂಲಾತಿ, ಬಡ್ಡಿ ಮತ್ತು ಅದಕ್ಕೆ ಅನುಗುಣವಾದ ದಂಡವನ್ನು ಎದುರಿಸಬೇಕಾಗುತ್ತದೆ.

ನವದೆಹಲಿಯಲ್ಲಿ ನಿನ್ನೆ ನಡೆದ ಜಿಎಸ್‌ಟಿ ಮಂಡಳಿಯ ಸಭೆಯ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಸಭೆಯಲ್ಲಿ ಯಾವುದೇ ದರ ಬದಲಾವಣೆ ಮಾಡಲಾಗಿಲ್ಲ ಮತ್ತು ದರ ರಚನೆಯು ಈಗ ಅಂತಿಮಗೊಂಡಿದೆ ಎಂದು ತಿಳಿಸಿದ್ದಾರೆ.

೧೦ ಸಾವಿರ ರೂಪಾಯಿ ಅಥವಾ ಅದಕ್ಕಿಂತ ಕಡಿಮೆ ಮೊತ್ತದ ಪ್ರಕರಣಗಳಿಗೆ ನೋಟಿಸ್‌ಗಳನ್ನು ಜಾರಿಗೊಳಿಸಲಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

---

ಜಿಎಸ್‌ಟಿ ಮಂಡಳಿಯು ನಿನ್ನೆ ಅನುಮೋದಿಸಿದ ಜಿಎಸ್‌ಟಿ ಸುಧಾರಣೆಗಳನ್ನು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದ್ದಾರೆ.

ಬಂಧನದ ನಿಬಂಧನೆಗಳ ರದ್ದತಿ, ಅಪರಾಧೇತರ ಕ್ರಮಗಳಿಗೆ ಹೆಚ್ಚಿನ ಒತ್ತು ಮತ್ತು ಸರಳೀಕೃತ ಕಾರ್ಯವಿಧಾನಗಳ ಕುರಿತಾದ ಮಂಡಳಿಯ ಶಿಫಾರಸುಗಳು ಅತ್ಯಂತ ಸಕಾರಾತ್ಮಕ ಪರಿಣಾಮವನ್ನು ಬೀರುತ್ತವೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಹೇಳಿದ್ದಾರೆ.

ತ್ವರಿತ ನಿರ್ಧಾರಗಳು, ಕಡಿಮೆ ಅನುಸರಣಾ ವೆಚ್ಚಗಳು, ಸ್ವಯಂಚಾಲಿತ ಮರುಪಾವತಿ ಮತ್ತು ನಂಬಿಕೆ ಆಧಾರಿತ ಆಡಳಿತದ ಮೇಲೆ ಗಮನಹರಿಸಲಾಗುತ್ತಿದೆ. ಜಿಎಸ್‌ಟಿಯನ್ನು ಹೆಚ್ಚು ದಕ್ಷ, ಪಾರದರ್ಶಕ ಮತ್ತು ನಾಗರಿಕ ಸ್ನೇಹಿಯನ್ನಾಗಿ ಮಾಡುವ ಸರ್ಕಾರದ ನಿರಂತರ ಪ್ರಯತ್ನಗಳಿಗೆ ಈ ಸುಧಾರಣೆಗಳು ಪೂರಕವಾಗಿವೆ ಎಂದು ಅವರು ತಿಳಿಸಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕುರಿತಾದ ಇಲಾಖಾ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ನಿನ್ನೆ ಆರಂಭವಾದ ಈ ಎರಡು ದಿನಗಳ ಸಮಾವೇಶದಲ್ಲಿ, ಎಲ್ಲಾ ರಾಜ್ಯಗಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಲಯಕ್ಕೆ ಸಂಬಂಧಿಸಿದ ರಾಜಕೀಯ ನಾಯಕರು ಮತ್ತು ಅಧಿಕಾರಿಗಳು ಪಾಲ್ಗೊಂಡಿದ್ದಾರೆ.

ಸಹಕಾರಿ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಲು, ರಾಷ್ಟ್ರೀಯ ಆದ್ಯತೆಗಳ ಬಗ್ಗೆ ಸಾಮೂಹಿಕ ಜವಾಬ್ದಾರಿಯ ಭಾವನೆಯನ್ನು ಬೆಳೆಸಲು ಮತ್ತು ಕೇಂದ್ರ ಹಾಗೂ ರಾಜ್ಯಗಳ ನಡುವಿನ ನಿಕಟ ಸಹಯೋಗದ ಮೂಲಕ ಫಲಿತಾಂಶಗಳನ್ನು ತ್ವರಿತಗೊಳಿಸಲು ಪ್ರಧಾನಿಯವರು ರೂಪಿಸಿರುವ ಇಲಾಖಾ ಸಮಾವೇಶಗಳ ಸರಣಿಯಲ್ಲಿ ಇದು ಎರಡನೆಯದಾಗಿದೆ.

ಈ ಸಮಾವೇಶವು ಪೋಷಣೆ, ಆರಂಭಿಕ ಶಿಕ್ಷಣ, ಮಕ್ಕಳ ರಕ್ಷಣೆ ಹಾಗೂ ಮಹಿಳೆಯರ ಸುರಕ್ಷತೆ ಮತ್ತು ಸಬಲೀಕರಣ ಸೇರಿದಂತೆ ನಾಲ್ಕು ಪ್ರಮುಖ ವಿಷಯಗಳ ಮೇಲೆ ಗಮನಹರಿಸುತ್ತಿದೆ.

ಇಲಾಖಾ ಸಮಾವೇಶದ ಈ ಮಾದರಿಯು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲುದಾರರನ್ನು ಒಂದೆಡೆ ಸೇರಿಸುತ್ತದೆ. ಇದು ವಲಯವಾರು ಆದ್ಯತೆಗಳ ಕುರಿತು ಚರ್ಚಿಸಲು, ಉತ್ತಮ ಕಾರ್ಯವಿಧಾನಗಳನ್ನು ಹಂಚಿಕೊಳ್ಳಲು, ಅನುಷ್ಠಾನದ ಸವಾಲುಗಳನ್ನು ಪರಿಹರಿಸಲು ಹಾಗೂ ಉತ್ತಮ ಆಡಳಿತ ಮತ್ತು ಸೇವಾ ವಿತರಣೆಗಾಗಿ ಕಾಲಮಿತಿಯ ಕ್ರಮಗಳ ಕುರಿತು ಒಮ್ಮತ ಮೂಡಿಸಲು ವೇದಿಕೆಯಾಗಿದೆ.

---

ಭಾರತೀಯ ಮೂಲದ ಮೈಕ್ರೋಸಾಫ್ಟ್ ಸಿಇಒ ಸತ್ಯ ನಾಡೆಲ್ಲಾ ಸೇರಿದಂತೆ ಅಮೆರಿಕದ ಆರು ಪ್ರಮುಖ ತಂತ್ರಜ್ಞಾನ ಪ್ರವರ್ತಕರಿಗೆ ವೈಜ್ಞಾನಿಕ ಸಾಧನೆ ಮತ್ತು ತಾಂತ್ರಿಕ ನಾವೀನ್ಯತೆಗಾಗಿ ಅಮೆರಿಕದ ಅತ್ಯುನ್ನತ ಪ್ರಶಸ್ತಿಗಳನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರದಾನ ಮಾಡಿದ್ದಾರೆ.

ಸತ್ಯ ನಾಡೆಲ್ಲಾ ಮತ್ತು ಡೆಲ್ ಟೆಕ್ನಾಲಜೀಸ್ ಸಂಸ್ಥಾಪಕ ಮೈಕೆಲ್ ಡೆಲ್ ಅವರಿಗೆ ರಾಷ್ಟ್ರೀಯ ತಂತ್ರಜ್ಞಾನ ಮತ್ತು ನಾವೀನ್ಯತೆ ಪದಕವನ್ನು ಅಮೆರಿಕ ಅಧ್ಯಕ್ಷರು ಪ್ರದಾನ ಮಾಡಿದರು.

ಇದೇ ವೇಳೆ ಖ್ಯಾತ ಉದ್ಯಮಿ ಎಲಾನ್ ಮಸ್ಕ್, ಗೂಗಲ್ ಸಹ-ಸಂಸ್ಥಾಪಕ ಸೆರ್ಗೆ ಬ್ರಿನ್, ಎನ್ವಿಡಿಯಾ ಸಿಇಒ ಜೆನ್ಸನ್ ಹುವಾಂಗ್ ಮತ್ತು ಎಎಮ್‌ಡಿ ಸಿಇಒ ಲಿಸಾ ಸು ಅವರು ರಾಷ್ಟ್ರೀಯ ವಿಜ್ಞಾನ ಪದಕಕ್ಕೆ ಭಾಜನರಾದರು.

ಕ್ಲೌಡ್ ಕಂಪ್ಯೂಟಿಂಗ್ ಯುಗಕ್ಕೆ ಮೈಕ್ರೋಸಾಫ್ಟ್ ಅನ್ನು ಪುನರುಜ್ಜೀವನಗೊಳಿಸುವ ಮತ್ತು ಸುಧಾರಿತ ಕೃತಕ ಬುದ್ಧಿಮತ್ತೆಯ ಅಭಿವೃದ್ಧಿ ಹಾಗೂ ಜಾಗತಿಕ ನಿಯೋಜನೆಯನ್ನು ಬೆಂಬಲಿಸುವ ಸಾಮರ್ಥ್ಯವಿರುವ ಮೂಲಸೌಕರ್ಯವನ್ನು ನಿರ್ಮಿಸುವಲ್ಲಿ ಸತ್ಯ ನಾಡೆಲ್ಲಾ ಅವರ ನಾಯಕತ್ವವನ್ನು ಈ ಪ್ರಶಸ್ತಿ ಗುರುತಿಸಿದೆ.

---

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ.

ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ತ್ರಿವಳಿ ತಲಾಖ್' ಕುರಿತ ಒಂದು ವರದಿ ಇಲ್ಲಿದೆ.

ಈ ಹಿಂದೆ ಭಾರತದಲ್ಲಿ ಒಂದೇ ಪದವನ್ನು ಮೂರು ಬಾರಿ ಉಚ್ಚರಿಸುವ ಮೂಲಕ, ಸೂಚನೆ ಇಲ್ಲದೆ, ಕಾರಣವಿಲ್ಲದೆ ಮತ್ತು ನಂತರ ಯಾವುದೇ ಮಾರ್ಗವಿಲ್ಲದೆ ಮುಸ್ಲಿಂ ಮಹಿಳೆಯಿಂದ ವಿಚ್ಛೇದನ ಪಡೆಯಬಹುದು ಎಂದಾಗಿತ್ತು.

ಮುಸ್ಲಿಂ ಮಹಿಳಾ ವಿವಾಹ ಹಕ್ಕುಗಳ ರಕ್ಷಣೆ ಕಾಯ್ದೆ, ೨೦೧೯, ತ್ರಿವಳಿ ತಲಾಖ್ ಅನ್ನು ರದ್ದುಗೊಳಿಸಿತು. ಅಲ್ಲದೇ, ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸುವ ಅಪರಾಧವೆಂದು ಘೋಷಿಸಿತು.

ಇದು ಮಹಿಳೆಯರಿಗೆ ಜೀವನಾಧಾರ ಭತ್ಯೆ ಮತ್ತು ಅಪ್ರಾಪ್ತ ಮಕ್ಕಳ ಪಾಲನೆಯ ಹಕ್ಕನ್ನು ನೀಡಿತು.

ಸಂವಿಧಾನದ ಖಾತರಿಯು ಪ್ರತಿಯೊಬ್ಬ ಭಾರತೀಯ ಮಹಿಳೆಗೆ, ಅವಳ ನಂಬಿಕೆ ಏನೇ ಇರಲಿ, ಸಮಾನವಾಗಿ ಸೇರಿದ್ದಾಗಿದೆ ಎಂಬ ಪ್ರಧಾನಿ ನರೇಂದ್ರ ಮೋದಿಯವರ ನಿಲುವನ್ನು ಈ ಸುಧಾರಣೆಯು ಹೊಂದಿತ್ತು.

ಕಾಯ್ದೆ ಜಾರಿಗೆ ಬಂದ ಒಂದು ವರ್ಷದೊಳಗೆ ವರದಿಯಾದ ಪ್ರಕರಣಗಳಲ್ಲಿ ಶೇಕಡಾ ೮೨ ರಷ್ಟು ಕುಸಿತವನ್ನು ಅಧಿಕೃತ ದತ್ತಾಂಶ ದಾಖಲಿಸಿದೆ.

---

ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ-ಎನ್‌ಟಿಎ, ಯುಜಿಸಿ ಎನ್‌ಇಟಿ ಡಿಸೆಂಬರ್ ೨೦೨೫ರ ಪರೀಕ್ಷೆಗೆ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ. ಅರ್ಹ ಅಭ್ಯರ್ಥಿಗಳು ugcnet.nta.nic.in ವೆಬ್‌ಸೈಟ್ ಮೂಲಕ ಜೂನಿಯರ್ ರಿಸರ್ಚ್ ಫೆಲೋಶಿಪ್, ಸಹಾಯಕ ಪ್ರಾಧ್ಯಾಪಕ ಹುದ್ದೆ ಹಾಗೂ ಪಿಎಚ್‌ಡಿ ಪ್ರವೇಶಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಈ ತಿಂಗಳ ೨೮ ಕೊನೆಯ ದಿನವಾಗಿದೆ. ಈ ಪರೀಕ್ಷೆಯು ಡಿಸೆಂಬರ್ ೧೪ ರಿಂದ ೧೯ ರ ನಡುವೆ ನಡೆಯಲಿದೆ.

---

ಭಾರತ ಮತ್ತು ರಷ್ಯಾ ಅಸ್ತಿತ್ವದಲ್ಲಿರುವ ಸೇನಾ-ತಾಂತ್ರಿಕ ಸಹಕಾರ ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಸಹ-ಉತ್ಪಾದನೆ ಮತ್ತು ಸಹ-ಅಭಿವೃದ್ಧಿ ಉಪಕ್ರಮಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಸಿವೆ.

ನವದೆಹಲಿಯಲ್ಲಿ ನಡೆದ ಭಾರತ-ರಷ್ಯಾ ಸೇನಾ-ತಾಂತ್ರಿಕ ಸಹಕಾರ ಮತ್ತು ರಕ್ಷಣಾ ಕೈಗಾರಿಕೆ ಕುರಿತ ಅಂತರ್ ಸರ್ಕಾರಿ ಆಯೋಗದ ೨೪ನೇ ಕಾರ್ಯಕಾರಿ ಸಮಿತಿ ಸಭೆಯ ಉದ್ಘಾಟನಾ ಅಧಿವೇಶನದಲ್ಲಿ ಈ ಚರ್ಚೆ ನಡೆಯಿತು.

ರಕ್ಷಣಾ ಉತ್ಪಾದನಾ ಕಾರ್ಯದರ್ಶಿ ಸಂಜೀವ್ ಕುಮಾರ್ ಮತ್ತು ರಷ್ಯಾದ ಸೇನಾ-ತಾಂತ್ರಿಕ ಸಹಕಾರದ ಫೆಡರಲ್ ಸೇವೆಯ ಪ್ರಥಮ ಉಪ ನಿರ್ದೇಶಕ ಆಂದ್ರೇ ಎ.ಬಾಯ್ಟ್ಸೋವ್ ಅವರು ಸಭೆಯ ಸಹ-ಅಧ್ಯಕ್ಷತೆ ವಹಿಸಿದ್ದರು. ಉಭಯ ದೇಶಗಳ ಹಿರಿಯ ಅಧಿಕಾರಿಗಳು ಚರ್ಚೆಯಲ್ಲಿ ಪಾಲ್ಗೊಂಡಿದ್ದರು.

---

೨೦೪೭ರ ವೇಳೆಗೆ ವಿಕಸಿತ ಭಾರತ ನಿರ್ಮಾಣದ ಗುರಿಗೆ ಯುವಜನರು ತಮ್ಮ ಕೌಶಲ್ಯ, ಸೃಜನಶೀಲತೆ ಮತ್ತು ನಾವೀನ್ಯತೆಯ ಸಾಮರ್ಥ್ಯವನ್ನು ಬಳಸಿಕೊಂಡು ಕೊಡುಗೆ ನೀಡಬೇಕು ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್.ಮುರುಗನ್ ಸಲಹೆ ನೀಡಿದ್ದಾರೆ.

ನೊಯ್ಡಾದ ಸಂಸ್ಥೆಯೊಂದರಲ್ಲಿ ವಿದ್ಯಾರ್ಥಿಗಳು ಮತ್ತು ಕಲಿಕಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ಅವರು, ಗುಣಮಟ್ಟದ ಶಿಕ್ಷಣ, ಕೌಶಲ್ಯಾಭಿವೃದ್ಧಿ, ನಿರಂತರ ಕಲಿಕೆ ಮತ್ತು ಉದ್ಯಮಶೀಲತೆ ಯುವಜನರಿಗೆ ಹೊಸ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಲು ನೆರವಾಗಲಿದೆ ಎಂದರು.

ಶಿಕ್ಷಣವನ್ನು ಕೌಶಲ್ಯ, ತಂತ್ರಜ್ಞಾನ, ಸಂಶೋಧನೆ, ಉದ್ಯಮಶೀಲತೆ ಮತ್ತು ಉದ್ಯೋಗದೊಂದಿಗೆ ಸಂಪರ್ಕಿಸುವ ವ್ಯವಸ್ಥೆ ಅಗತ್ಯವಿದೆ ಎಂದು ಸಚಿವ ಡಾ. ಎಲ್.ಮುರುಗನ್ ಅಭಿಪ್ರಾಯಪಟ್ಟರು.

---

ಆರ್ಕ್ಟಿಕ್ ಓಪನ್ ಸೂಪರ್ ೫೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಎರಡು ಬಾರಿಯ ಒಲಿಂಪಿಕ್ಸ್ ಪದಕ ವಿಜೇತೆ ಪಿ.ವಿ.ಸಿಂಧು ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

ಫಿನ್‌ಲ್ಯಾಂಡ್‌ನ ವಾಂಟಾದಲ್ಲಿ ನಡೆದ ಎರಡನೇ ಸುತ್ತಿನ ಪಂದ್ಯದಲ್ಲಿ ಸಿಂಧು, ಜಪಾನ್‌ನ ರಿಕೊ ಗುಂಜಿ ಅವರನ್ನು ೨೧-೧೫, ೨೧-೧೫ ನೇರ ಸೆಟ್‌ಗಳಿಂದ ಸೋಲಿಸಿದರು. ಆರನೇ ಶ್ರೇಯಾಂಕದ ಸಿಂಧು ಮುಂದಿನ ಸುತ್ತಿನಲ್ಲಿ ಅಗ್ರ ಶ್ರೇಯಾಂಕದ ಥಾಯ್ಲೆಂಡ್‌ನ ಮಾಜಿ ವಿಶ್ವ ಚಾಂಪಿಯನ್ ರಟ್ಚನೋಕ್ ಇಂತನಾನ್ ಅವರನ್ನು ಎದುರಿಸಲಿದ್ದಾರೆ.

ಸಿಂಗಲ್ಸ್ ವಿಭಾಗದಲ್ಲಿ ಭಾರತದ ತರುಣ್ ಮನ್ನೆಪಳ್ಳಿ, ಕಿದಂಬಿ ಶ್ರೀಕಾಂತ್ ಹಾಗೂ ತನ್ವಿ ಶರ್ಮಾ ಸೋಲು ಕಂಡು ಪಂದ್ಯಾವಳಿಯಿಂದ ಹೊರಬಿದ್ದಿದ್ದಾರೆ.

ಪುರುಷರ ಡಬಲ್ಸ್‌ನಲ್ಲಿ ಇಂದು ಕೃಷ್ಣ ಪ್ರಸಾದ್ ಗರಗ ಮತ್ತು ಪೃಥ್ವಿ ಕೃಷ್ಣಮೂರ್ತಿ ರಾಯ್ ಜೋಡಿ, ಇಂಗ್ಲೆಂಡ್‌ನ ಆಲಿವರ್ ಬಟ್ಲರ್ ಮತ್ತು ಸ್ಯಾಮ್ಯುಯೆಲ್ ಜೋನ್ಸ್ ಅವರನ್ನು ಎದುರಿಸಲಿದೆ.

---

ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಅಂತಾರಾಷ್ಟ್ರೀಯ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ಇಂದು ರಾಂಚಿಯಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ಎದುರಿಸಲಿದೆ.

ಪಂದ್ಯ ಭಾರತೀಯ ಕಾಲಮಾನದ ಪ್ರಕಾರ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

ಆರಂಭಿಕ ಪಂದ್ಯದಲ್ಲಿ ನಾಯಕ ಶ್ರೇಯಸ್ ಅಯ್ಯರ್ ಅವರ ಶತಕದ ನೆರವಿನಿಂದ ಗೆಲುವು ಸಾಧಿಸಿರುವ ಭಾರತ, ಸರಣಿಯಲ್ಲಿ ೧-೦ ಅಂತರದ ಮುನ್ನಡೆಯಲ್ಲಿದೆ.

---

ಸೌದಿ ಅರೇಬಿಯಾದ ರಿಯಾದ್‌ನ ಅಭಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಕಿಂಗ್ ಖಾಲಿದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳನ್ನು ಗುರಿಯಾಗಿಸಿಕೊಂಡು ಕಳೆದ ಕೆಲವು ದಿನಗಳಲ್ಲಿ ನಡೆದ ದಾಳಿಗಳನ್ನು ಭಾರತ ಖಂಡಿಸಿದೆ.

ಈ ದಾಳಿಗಳಲ್ಲಿ ನಾಗರಿಕರು ಮೃತಪಟ್ಟಿದ್ದಾರೆ ಮತ್ತು ಗಾಯಗೊಂಡಿದ್ದಾರೆ. ದಾಳಿಗಳಲ್ಲಿ ನಾಗರಿಕ ಮೂಲಸೌಕರ್ಯಗಳನ್ನು ಗುರಿಯಾಗಿಸುವುದು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಭಾರತ, ತೀವ್ರ ಸಂತಾಪ ವ್ಯಕ್ತಪಡಿಸುತ್ತದೆ. ಅಲ್ಲದೆ, ಸೌದಿ ಅರೇಬಿಯಾದ ಜನತೆ ಮತ್ತು ಸರ್ಕಾರದ ಬೆಂಬಲಕ್ಕೆ ಭಾರತ ನಿಂತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದೆ.

__________ ಮುಕ್ತಾಯ _________